ಸರ್ಕಾರಿ ಕಛೇರಿಗಳಲ್ಲಿ ಅತ್ಯುತ್ತಮವಾಗಿ ಕೆಲಸ ನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳನ್ನು ಗುರುತಿಸಿ, ಆಯಾ ಜಿಲ್ಲೆಗಳಲ್ಲಿ ಪ್ರತಿ ವರ್ಷ ಗ್ರೂಪ್ "ಎ" "ಬಿ" "ಸಿ" ಮತ್ತು "ಡಿ" ವೃಂದದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ನೀಡಿ, ಸಿಬ್ಬಂದಿಗಳ ಮನೋಸ್ಥೈರ್ಯ ಹೆಚ್ಚಿಸಲಾಗುತ್ತಿದೆ.

ಹೆಚ್ಚುವರಿ ವಿದ್ಯಾರ್ಥಿ ನಿಲಯಗಳು

277 (1194), ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ)

ಅ) ಹಾಸನ ಜಿಲ್ಲೆಯಲ್ಲಿ ಪ್ರತಿ ವರ್ಷ 7 ರಿಂದ 8 ಸಾವಿರ ಗ್ರಾಮೀಣ ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣ ಮತ್ತು ಪದವಿ ಶಿಕ್ಷಣ ಪಡೆಯುತ್ತಿದ್ದು ಸದರಿ ವಿದ್ಯಾರ್ಥಿಗಳಲ್ಲಿ ಬಹಳಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯದ ಸೌಕರ್ಯ ದೊರಕದೆ ಇರುವುದು ಸರ್ಕಾದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ವಿದ್ಯಾರ್ಥಿಗಳಿಗೆ ಸಮರ್ಪಕ ವಿದ್ಯಾಭ್ಯಾಸ ದೊರಕುವಂತೆ ಮಾಡಲು ವಿದ್ಯಾರ್ಥಿ ನಿಲಯಗಳಲ್ಲಿ ಸಂಖ್ಯಾಬಲವನ್ನು ಹೆಚ್ಚಿಸಲು ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹಾಸನ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 12 ಬಾಲಕರ 11 ಬಾಲಕಿಯರ ಒಟ್ಟು 23 ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳನ್ನು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 19 ಬಾಲಕರ ಮತ್ತು 16 ಬಾಲಕಿಯರ ಒಟ್ಟು 35 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ.

ಆದ್ದರಿಂದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಕರ್ಯ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಯಗಳಲ್ಲಿ ಪ್ರವೇಶಾವಕಾಶ ನೀಡಲಾಗುತ್ತಿರುವುದರಿಂದ ವಿದ್ಯಾರ್ಥಿನಿಲಯ ಪ್ರವೇಶದಿಂದ ವಂಚಿತರಾಗುವ ಸಂದರ್ಭ ಉದ್ಭವಿಸುವುದಿಲ್ಲ

2013–14ನೇ ಸಾಲಿನಿಂದ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರೆಯದ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ "ವಿದ್ಯಾಸಿರಿ" ಊಟ ಮತ್ತು ವಸತ ಸಹಾಯ ಯೋಜನೆಯನ್ನು ಜಾರಿಗೆ ತರಲಾಗಿದೆ.

ಒಂದು ವೇಳೆ ಮಂಜೂರಾತಿ ಸಂಖ್ಯೆಗಿಂತ ತುಂಬಾ ಹೆಚ್ಚಿನ ಸಂಖ್ಯೆಯ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಪ್ರವೇಶ ಕೋರಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಸ್ಥಳಗಳಿಗೆ ಹೊಸ ವಿದ್ಯಾರ್ಥಿ ನಿಲಯ ಮಂಜೂರಾತಿಗೆ ಸಂಬಂಧಿಸಿದಂತೆ 2013–14 ಮತ್ತು 2014–15 ನೇಸಾಲುಗಳಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಬಂದ ಅರ್ಹ ಅರ್ಜಿದಾರರರ ಸಂಖ್ಯೆ, ಪ್ರವೇಶ ನೀಡಿದ ನವೀಕರಣ ಹಾಗೂ ನವೀನ ಹಾಗ ನವೀನ ಅರ್ಜಿದಾರರ ವಿವರಗಳನ್ನು ಸಂಬಂಧಪಟ್ಟ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳಿಂದ ಪಡೆದು, ನಂತರ ಸಂಖ್ಯಾಬಲ ಹೆಚ್ಚಳ ಹಾಗೂ ಹೆಚ್ಚುವರಿ ಹುದ್ದೆಗಳ ಮಂಜೂರಾತಿ ಬಗ್ಗೆ ಬೇಡಿಕೆ ಮತ್ತು ಅವಶ್ಯಕತೆಯನ್ನು ಅನುಸರಿಸಿ ಅಂತಹ ಸ್ಥಳಗಳಿಗೆ ಮಾತ್ರ ಹೆಚ್ಚುವರಿ ವಿದ್ಯಾರ್ಥಿ ನಿಲಯ ಮಂಜೂರು ಮಡಲು ಪರಿಶೀಲಲಿಸಲಾಗುವುದು.

ಸಂಖ್ಯಾಬಲಕ್ಕೆ ಅನುಗುಣವಾಗಿ ಹೆಚ್ಚುವರಿ ಕೊಠಡಿಗಳು ಅವಶ್ಯಕತೆ ಇರುವ ವಿದ್ಯಾರ್ಥಿ ನಿಲಯಗಳಿಗೆ ಕೊಠಡಿಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಪ್ರಸ್ತುತ ಹಾಸನ ಜಿಲ್ಲೆಯಲ್ಲಿ 11 ವಿದ್ಯಾರ್ಥಿ ನಿಲಯಗಳಲ್ಲಿ 45 ವಾಸದ ಕೊಠಡಿ, 30 ಶೌಚಾಲಯ, 30 ಸ್ನಾನಗೃಹಗಳನ್ನು ನಿರ್ಮಾಣ ಮಾಡಲು ₹ 503.41 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಪೂರ್ಣ ಅನುದಾನವನ್ನು ನಿರ್ಮಾಣ ಏಜೆನ್ಸಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

ಇನ್ನೂ ಹೆಚ್ಚುವರಿ ಕಟ್ಟಡ/ಕೊಠಡಿಗಳು ಅವಶ್ಯಕತೆ ಇದ್ದಲ್ಲಿ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳಿಂದ ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆ ಪಡೆದು ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ವಸತಿ ಶಾಲೆಗಳು

278 (1634), ಶ್ರೀ ಜಗದೀಶ್ ಕುಮಾರ್ ಆರ್. (ಹೆಬ್ಬಾಳ)

ಅ) ರಾಜ್ಯದಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಕ್ಷೇತ್ರವಾರು ಮಾಹಿತಿ ಒದಗಿಸುವುದು)

ಆ) ಸದರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಶಾಲಾವಾರು ಮಕ್ಕಳ ಸಂಖ್ಯೆ ಎಷ್ಟು;

ಇ) ಈ ಶಾಲೆಗಳಲ್ಲಿ ಅನುಮೋದಿತ ಹುದ್ದೆಗಳು ಎಷ್ಟು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕ ಹಾಗೂ ಲಿಪಿಕ ಹುದ್ದೆಗಳು ಎಷ್ಟು ವಿವರ ಒದಗಿಸುವುದು;